ಕರ್ನಾಟಕ ಸರ್ಕಾರ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ

# ಕುವೆಂಪು ಭಾಷಾ ಭಾರತಿ ಪ್ರಾಧಿಕಾರ

**ಕಲಾಗ್ರಾಮ, ಜ್ಞಾನಭಾರತಿ , ಮಲ್ಲತ್ತಹಳ್ಳಿ, ಬೆಂಗಳೂರು-5600056 ದೂ: 080-23183311/ 23183312**

ಇ ಮೇಲ್: Kbbp-bengaluru@ka.gov.in ಜಾಲತಾಣ: https://kuvempubhashabharathi.karnataka.gov.in/

---

**ಕುಭಾಪ್ರಾ/128/ಪು.ಬಹು-2020/2020-21** **ದಿನಾಂಕ29.01.2021**

ಪತ್ರಿಕಾ ಪ್ರಕಟಣೆ

ವಿಷಯ: ಕುವೆಂಪು ಭಾಷಾ ಭಾರತಿ ಪ್ರಾಧಿಕಾರವು ಅನುವಾದಿತ ಪುಸ್ತಕಗಳಿಗೆ ನೀಡಲಿರುವ 2020ನೇ ಸಾಲಿನ ಪುಸ್ತಕ ಬಹುಮಾನ ಯೋಜನೆಗೆ ಪುಸ್ತಕಗಳನ್ನು ಆಹ್ವಾನಿಸುವ ಕುರಿತು.

************

ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಪುಸ್ತಕ ಬಹುಮಾನ ನೀಡಿಕೆಗೆ ಸಂಬಂಧಿಸಿದಂತೆ **2019**ನೇ ಸಾಲಿನಲ್ಲಿ ಅಂದರೆ ದಿನಾಂಕ:**01.01.2020** ರಿಂದ **31.12.2020**ರವರೆಗಿನ ಅವಧಿಯಲ್ಲಿ ಪ್ರಥಮಾವೃತ್ತಿಯಲ್ಲಿ ಪ್ರಕಟವಾಗಿರುವ ಅನುವಾದಿತ ಪುಸ್ತಕಗಳನ್ನು ಹಾಗೂ ಅನುವಾದ ಅಧ್ಯಯನವನ್ನು ಕುರಿತ ಪುಸ್ತಕಗಳನ್ನು **2020**ನೇ ಸಾಲಿನ ಪುಸ್ತಕ ಬಹುಮಾನ ನೀಡಿಕೆಗಾಗಿ ಅರ್ಹ ಅನುವಾದಕರು/ಪ್ರಕಾಶಕರಿಂದ ಆಹ್ವಾನಿಸಲಾಗಿದೆ.

*ಕನ್ನಡದಿಂದ ಇತರ ಯಾವುದೇ ಭಾಷೆಗಾಗಲೀ ಇಲ್ಲವೇ ಇತರ ಯಾವುದೇ ಭಾಷೆಯಿಂದ ಕನ್ನಡಕ್ಕೆ ಅನುವಾದಗೊಂಡಿರುವ* ಪ್ರಥಮಾವೃತ್ತಿಯಲ್ಲಿ ಪ್ರಕಟಗೊಂಡಿರುವ *ಕೃತಿಗಳನ್ನು ಬಹುಮಾನಕ್ಕಾಗಿ ಪರಿಗಣಿಸಲಾಗುತ್ತದೆ.* 2020*ರ ಸಾಲಿನಲ್ಲಿ ಅನುವಾದ ಸಾಹಿತ್ಯವನ್ನು ಕುರಿತ 'ಅಧ್ಯಯನ ಪುಸ್ತಕಗಳನ್ನು ಕೂಡ ಬಹುಮಾನಕ್ಕಾಗಿ ಪರಿಗಣಿಸಲಾಗುತ್ತದೆ. ಪ್ರಥಮಾವೃತ್ತಿಯಲ್ಲಿ* 2020*ನೇ ಸಾಲಿನಲ್ಲಿ ಪ್ರಕಟವಾಗಿರುವ ಅನುವಾದಿತ ಪುಸ್ತಕಗಳ ಬಗ್ಗೆ ಮಾಹಿತಿ ಇರುವವರು ಸಹ ಪುಸ್ತಕಗಳನ್ನು ಕಚೇರಿಗೆ ಕಳುಹಿಸಿಕೊಡಬಹುದಾಗಿದೆ. ಬಹುಮಾನಿತ ಕೃತಿಗಳಿಗೆ ಪ್ರಾಧಿಕಾರವು ನಿಗದಿಪಡಿಸಿದ ಮೊತ್ತವನ್ನು ಬಹುಮಾನವಾಗಿ ನೀಡಲಾಗುತ್ತದೆ.*

ಪುಸ್ತಕ ಬಹುಮಾನಕ್ಕೆ ಪುಸ್ತಕಗಳನ್ನು ಕಳುಹಿಸುವವರು ***ಅನುವಾದಿತ ಪ್ರಕಟಣೆಗಳ*** ಪ್ರತಿ ಪುಸ್ತಕದ ನಾಲ್ಕು ***ಪ್ರತಿಗಳನ್ನು*** ಉಚಿತವಾಗಿ *ರಿಜಿಸ್ಟ್ರಾರ್, ಕುವೆಂಪು ಭಾಷಾ ಭಾರತಿ ಪ್ರಾಧಿಕಾರ ಜ್ಞಾನಭಾರತಿ, ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು-*560056 *ದೂ:*23183311/12 *ಕಚೇರಿಗೆ ಖುದ್ದಾಗಿ ಅಥವಾ ಅಂಚೆ/ಕೊರಿಯರ್ ಮೂಲಕ ದಿನಾಂಕ:*10.03.2021*ರೊಳಗಾಗಿ ತಲುಪಿಸಬೇಕೆಂದು ಈ ಮೂಲಕ ಕೋರಲಾಗಿದೆ.*

*ವಂದನೆಗಳೊಂದಿಗೆ,*

*ತಮ್ಮ ವಿಶ್ವಾಸಿ*

*(ಈಶ್ವರ್ ಕು.ಮಿರ್ಜಿ)*

*ರಿಜಿಸ್ಟ್ರಾರ್*